## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : | 81 |
| ಸದಸ್ಯರ ಹೆಸರು | : | ಶ್ರೀ ಹೆಚ್ ಎಸ್. ಗೋಪಿನಾಥ್ |
| ಉತ್ತರಿಸಬೇಕಾದ ದಿನಾಂಕ | : | 17.08.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳ ಪೈಕಿ ಮೂಲಸೌಕರ್ಯದ (ಕಟ್ಟಡ. ಕುಡಿಯುವ ನೀರು, ಶೌಚಾಲಯ. ವಿದ್ಯುತ್ ಮತ್ತು ಇತ್ಯಾದಿಗಳ) ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಬಂದಿರುತ್ತದೆ.<br><br>ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯ /ಸೌಲಭ್ಯಗಳ ಕೊರತೆಯನ್ನು ಗುರುತಿಸಿ ನಿವಾರಿಸುವುದು ನಿರಂತರ ಪ್ರಕ್ರಿಯೆಯಾಗಿದ್ದು, ಈ ಸಂಬಂಧ ಪ್ರತಿ ವರ್ಷ ರಾಜ್ಯ ಸರ್ಕಾರದಿಂದ ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಮತ್ತು ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳಡಿ ಮಂಜೂರಾಗುವ ಅನುದಾನದಲ್ಲಿ ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಹಾಗೂ ಅವಶ್ಯವಿರುವ ಮೂಲಸೌಲಭ್ಯಗಳ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಅರ್ಹತೆ ಮತ್ತು ಆದ್ಯತೆಯಂತೆ ಕ್ರಿಯಾಯೋಜನೆಯನ್ನು ರೂಪಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಅನುಮೋದನೆ ನೀಡಿ ಮೂಲಸೌಲಭ್ಯಗಳನ್ನು ಒದಗಿಸಿ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗುತ್ತಿದೆ.<br><br>ರಾಜ್ಯ ವಲಯದ ಅನುದಾನದಡಿಯಲ್ಲಿನ ಈ ಕೆಳಕಂಡ ಮೂಲಸೌಕರ್ಯಗಳನ್ನು ಒದಗಿಸಲಾಗುತ್ತಿದೆ.<br>• ನೂತನ ಶಾಲಾ ಕೊಠಡಿಗಳ ನಿರ್ಮಾಣ.<br>• ಶಾಲಾ ಕೊಠಡಿಗಳ ದುರಸ್ತಿ.<br>• ಶಾಲಾ ಶೌಚಾಲಯಗಳ ನಿರ್ಮಾಣ ಮತ್ತು ನಿರ್ವಹಣೆ.<br>• ಶಾಲೆಗಳಿಗೆ ಪೀಠೋಪಕರಣಗಳ ಸರಬರಾಜು.<br><br>ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಈ ಕೆಳಕಂಡ ಮೂಲಸೌಕರ್ಯಗಳನ್ನು |

<table>
<tr>
<td></td>
<td></td>
<td>ಒದಗಿಸಲಾಗುತ್ತಿದೆ.<br>• ನೂತನ ಶಾಲಾ ಕೊಠಡಿಗಳ ನಿರ್ಮಾಣ.<br>• ಶಾಲಾ ಶೌಚಾಲಯಗಳ ನಿರ್ಮಾಣ ಮತ್ತು ನಿರ್ವಹಣೆ.<br>• ಶಾಲೆಗಳಿಗೆ ಪೀಠೋಪಕರಣಗಳ ಸರಬರಾಜು.<br>• ಕುಡಿಯುವ ನೀರು.<br><br>ಸಮುದಾಯ ಮತ್ತು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (CCSR) ಕಾರ್ಯಕ್ರಮದಡಿ ಅನೇಕ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಲು ಅವಕಾಶ ಕಲ್ಪಿಸಲಾಗಿದೆ.<br><br>ರಾಜ್ಯ ಸರ್ಕಾರದಿಂದ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳಾದ ಸಮಗ್ರ ಶಿಕ್ಷಣ ಕರ್ನಾಟಕ ಹಾಗೂ ಪಿ.ಎಂ ಶ್ರೀ ಯೋಜನೆಗಳಡಿ ಸರ್ಕಾರಿ ಶಾಲೆಗಳ ನಿರ್ವಹಣೆಗಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತದೆ. ಸದರಿ ಅನುದಾನದಲ್ಲಿ ಶೌಚಾಲಯ ನಿರ್ವಹಣೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ವಿದ್ಯುತ್ ಬಿಲ್ಲುಗಳನ್ನು ಭರಿಸಲಾಗುತ್ತದೆ.</td>
</tr>
<tr>
<td>ಆ)</td>
<td>ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ಮತ್ತು ಎಷ್ಟು ಖರ್ಚು ಮಾಡಲಾಗಿದೆ: ಯಾವ ಯಾವ ಕಾಮಗಾರಿಗಳಿಗೆ ಖರ್ಚು ಮಾಡಲಾಗಿದೆ: ಬಾಕಿ ಉಳಿದಿರುವ ಅನುದಾನವೆಷ್ಟು: (ಸಂಪೂರ್ಣ ವಿವರ ನೀಡುವುದು)</td>
<td>1. ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಗೆ ರೂ.346.30 ಲಕ್ಷಗಳ ಅನುದಾನ ಅನುಷ್ಠಾನ ಇಲಾಖೆಗಳಿಗೆ ಬಿಡುಗಡೆ ಮಾಡಲಾಗಿದ್ದು, ಪೂರ್ಣ ಪ್ರಮಾಣದಲ್ಲಿ ಬಿಲ್ಲುಗಳು ಅನುಷ್ಠಾನ ಇಲಾಖೆಗೆ ಸಲ್ಲಿಕೆಯಾಗಿರದ ಕಾರಣ ರೂ.78.55 ಲಕ್ಷಗಳ ಅನುದಾನ ಖರ್ಚು ಮಾಡಲಾಗಿರುತ್ತದೆ.<br>2.<br>(ರೂ.ಲಕ್ಷಗಳಲ್ಲಿ)
<table>
<tr><th>ಕಾಮಗಾರಿ ವಿವರ</th><th>ಬಿಡುಗಡೆ ಮಾಡಲಾದ ಅನುದಾನ</th><th>ಖರ್ಚು ಮಾಡಲಾದ ಅನುದಾನ</th><th>ಉಳಿಕೆ ಇರುವ ಅನುದಾನ</th></tr>
<tr><td>ಶೌಚಾಲಯ</td><td>136.64</td><td>140.03</td><td>172.00</td></tr>
<tr><td>ಕೊಠಡಿ ನಿರ್ಮಾಣ</td><td>679.35</td><td>352.78</td><td>--</td></tr>
<tr><td>ಕೊಠಡಿ ದುರಸ್ತಿ</td><td>671.43</td><td>669.67</td><td>1.76</td></tr>
</table>
</td>
</tr>
</table>

| | | | |
|---|---|---|---|
| CWSN | 32.50 | 32.50 | --- |
| BPS | 3052.30 | 2649.41 | 402.89 |
| KPS | 38.64 | 38.64 | --- |
| PMSHRI | 138.12 | 102.54 | 35.59 |

3. (ರೂ.ಲಕ್ಷಗಳಲ್ಲಿ)

| ವರ್ಷ | ಹೊಸ ಕೊಠಡಿ ನಿರ್ಮಾಣ | ದುರಸ್ತಿ | ಶೌಚಾಲಯ |
|---|---|---|---|
| 2023-24 | 949.18 | 0.00 | 188.68 |
| 2024-25 | 237.30 | 593.93 | 41.60 |
| 2025-26 | 696.45 | 116.35 | 172.00 |

ಮೇಲ್ಕಂಡ ಅನುದಾನದಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಏಜೆನ್ಸಿಯಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ರವರಿಗೆ ಬಿಡುಗಡೆ ಮಾಡಲಾಗಿದೆ.

| | | |
|---|---|---|
| ಇ) | ಈ ಶಾಲೆಗಳು ಮುಚ್ಚುವ ಪರಿಸ್ಥಿತಿ ಬರದಂತೆ ಸರ್ಕಾರ ತೆಗೆದುಕೊಂಡಿರುವ ತುರ್ತು ಕ್ರಮಗಳು ಯಾವುವು? (ವಿವರ ನೀಡುವುದು) | ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳು, ಪೂರ್ವ ಪ್ರಾಥಮಿಕ ತರಗತಿಯಿಂದ 5ನೇ ತರಗತಿಯವರೆಗೆ ದ್ವಿಭಾಷಾ ಮಾಧ್ಯಮ ತರಗತಿಗಳು, 6 ನೇ ತರಗತಿಯಿಂದ ಹೆಚ್ಚುವರಿ ಆಂಗ್ಲ ಮಾಧ್ಯಮ ವಿಭಾಗ ಪ್ರಾರಂಬಿಸುವುದು,, ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಿ ಮೂಲಸೌಕರ್ಯಗಳನ್ನು ಉನ್ನತೀಕರಿಸುವುದು, ವಿವಿಧ ಯೋಜನೆಗಳ ಅನುದಾನಗಳಿಂದ ಅಗತ್ಯತೆ ಮತ್ತು ಅರ್ಹತೆಯಂತೆ ಮೂಲಸೌಕರ್ಯಗಳ ಒದಗಿಸುವ ಮೂಲಕ ಸರ್ಕಾರಿ ಶಾಲೆಗಳು ಮುಚ್ಚುವ ಪರಿಸ್ಥಿತಿ ಕ್ರಮವಹಿಸಲಾಗಿದೆ. |

ಸಂಖ್ಯೆ: ಇಪಿ 224 ಯೋಸಕ 2026

**(ಎಸ್. ಮಧು ಬಂಗಾರಪ್ಪ)**

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**